**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ACT0GRT2/15/2023

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು – 560001,
ದಿನಾಂಕ: 10.09.2024

**:ಸುತ್ತೋಲೆ:**

**ವಿಷಯ:-** ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸಹಾಯಾನುದಾನಿತ ಪಾಲಿಟೆಕ್ನಿಕ್ ಹಾಗೂ ಸಹಾಯಾನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಇಲಾಖಾ/ಕಛೇರಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಹಣಕಾಸಿನ ಅಥವಾ ಇನ್ನಿತರೆ ಬೇಡಿಕೆಗೆ ಒತ್ತಾಯಿಸಿದಲ್ಲಿ ಕೇಂದ್ರ ಕಛೇರಿ ಅಥವಾ ಹತ್ತಿರದ ಲೋಕಾಯುಕ್ತ ಆರಕ್ಷಕ ಠಾಣೆಗೆ ಮಾಹಿತಿಯನ್ನು ನೀಡುವ ಕುರಿತು.

**ಉಲ್ಲೇಖ:-** 1. ಸರ್ಕಾರದ ಸುತ್ತೋಲೆ ಪತ್ರ ಸಂ: ಸಿಆಸುಇ 189 ಸೇಲೋಯು 2023, ದಿನಾಂಕ:13.08.2024.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಲೋಕಾಯುಕ್ತ ಸಂಸ್ಥೆಯ ರಚನೆ ಕಾರ್ಯವ್ಯಾಪ್ತಿ, ವಿಳಾಸಗಳು ಮತ್ತು ಕಾರ್ಯ ನಿರ್ವಹಣಾ ರೀತಿಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವ ಉದ್ದೇಶದಿಂದ ಕರ್ನಾಟಕ ಸರ್ಕಾರದ ವ್ಯಾಪ್ತಿಗೆ ಒಳಪಡುವ ಎಲ್ಲಾ ಇಲಾಖೆ/ಕಛೇರಿ/ಸಂಸ್ಥೆ/ಪಾಲಿಕೆ/ನಗರ ಸಭೆ/ನಿಗಮ ಮಂಡಳಿಗಳ ಪ್ರವೇಶ ದ್ವಾರ ಹಾಗೂ ಸದರಿ ಕಛೇರಿಗಳಿಗೆ ಬರುವ ಸಾರ್ವಜನಿಕರಿಗೆ ಮುಕ್ತವಾಗಿ ಕಾಣುವಂತಹ ತೆರೆದ ಸ್ಥಳಗಳಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಸಹಾಯವಾಣಿ ಸಂಖ್ಯೆಗಳಾದ **080-22375014 , 080-22011298** ಮತ್ತು **TOLL FREE FROM MOBILE PHONES – 18004255320** ಗಳನ್ನು ನಾಮ ಫಲಕದಲ್ಲಿ ಅಳವಡಿಸಿ ಪ್ರದರ್ಶಿಸುವಂತೆ ತಿಳಿಸಲಾಗಿರುತ್ತದೆ.

**ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಸಂಸ್ಥೆಗಳಲ್ಲಿ ಕೇಂದ್ರ ಕಛೇರಿಯಲ್ಲಿನ ಅಧಿಕಾರಿ/ಸಿಬ್ಬಂದಿಗಳ ಹೆಸರನ್ನು ಬಳಸಿಕೊಂಡು ಮಾಸಿಕ ವೇತನ (ಸಹಾಯಾನುದಾನ) , ವೇತನ ಬಾಕಿಗಳು ಹಾಗೂ ಪಿಂಚಣಿ ಮಂಜೂರಾತಿ ಸೌಲಭ್ಯಗಳನ್ನು ಒಳಗೊಂಡಂತೆ ಇನ್ನಿತರೆ ಸೇವಾ ಸಂಬಂಧಿತ ಕೆಲಸ ಕಾರ್ಯಗಳಿಗೆ ಹಣ ನೀಡಬೇಕೆಂದು ಮಧ್ಯವರ್ತಿಗಳ ಸೋಗಿನಲ್ಲಿ ಮತ್ತು ಸಂಘ ಸಂಸ್ಥೆಗಳ ಹೆಸರಿನಲ್ಲಿ ಹಣ ವಸೂಲಿ ಮಾಡುತ್ತಿರುವುದಾಗಿ ಸುದ್ದಿಗಳು ಹರಿದಾಡುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.**

ಮುಂದುವರೆದು, ಇಲಾಖಾ ವ್ಯಾಪ್ತಿಯಲ್ಲಿನ ಸಹಾಯಾನುದಾನಿತ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸಂಬಂಧಿಸಿದ ಅಧಿಕೃತ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಕೇಂದ್ರ ಕಛೇರಿಯಲ್ಲಿ ಯಾರೂ ಕೂಡ ಹಣಕಾಸು ಅಥವಾ ಯಾವುದೇ ರೀತಿಯ ಬೇಡಿಕೆಯಿಟ್ಟಿರುವುದಿಲ್ಲ.

ಸರ್ಕಾರಿ ಕಛೇರಿಗಳಲ್ಲಿ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಹಣ ಮತ್ತು ಇನ್ನಿತರೆ ಆಮಿಷಗಳು/ಬೇಡಿಕೆಗಳನ್ನು ನೀಡುವುದು ಹಾಗೂ ಪಡೆಯುವುದು ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಎಲ್ಲಾ ಸಹಾಯಾನುದಾನಿತ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಕೇಂದ್ರ ಕಛೇರಿಯಲ್ಲಿನ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಹಣ ಅಥವಾ ಯಾವುದೇ ರೀತಿಯ ಬೇಡಿಕೆಗಳನ್ನು ಮುಂದಿಟ್ಟು ಒತ್ತಾಯಿಸಿದ್ದಲ್ಲಿ ಅಥವಾ ಈ ಕುರಿತು ಮಾಹಿತಿಯಿದ್ದಲ್ಲಿ ಕೂಡಲೇ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಸಹಾಯವಾಣಿ ಸಂಖ್ಯೆಗಳಾದ **080-22375014 , 080-22011298** ಮತ್ತು **TOLL FREE FROM MOBILE PHONES – 18004255320** ಹಾಗೂ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ: **080-22200777, 080-22200291, 080-22261212** ಅಥವಾ **ಹತ್ತಿರದ ಲೋಕಾಯುಕ್ತ ಅರಕ್ಷಕ ಠಾಣೆಗೆ** ಮಾಹಿತಿಯನ್ನು ನೀಡಿ, ಭ್ರಷ್ಟಾಚಾರ ಮುಕ್ತ ಆಡಳಿತವನ್ನು ನಿರ್ವಹಿಸಲು ಸಹಕಾರ ನೀಡಬೇಕಾಗಿ ಈ ಮೂಲಕ ತಿಳಿಯಪಡಿಸಲಾಗಿದೆ.

**"ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಿದೆ"**

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:-

1. 44 ಅನುದಾನಿತ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ
   **(ಕಡ್ಡಾಯವಾಗಿ ಸಂಸ್ಥೆಯ ಸೂಚನಾ ಫಲಕದಲ್ಲಿ ಅಳವಡಿಸುವುದು)**
2. 10 ಅನುದಾನಿತ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳಿಗೆ.
   **(ಕಡ್ಡಾಯವಾಗಿ ಸಂಸ್ಥೆಯ ಸೂಚನಾ ಫಲಕದಲ್ಲಿ ಅಳವಡಿಸುವುದು)**
3. ಹೆಚ್.ಆರ್.ಎಂ.ಎಸ್ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ತಾಂತ್ರಿಕ ಶಿಕ್ಷಣ ಕೇಂದ್ರ ಕಛೇರಿ ಇ-ಗವನ್ರ್ಸ್ ವಿಭಾಗ- ಮಾಹಿತಿಗಾಗಿ ಹಾಗೂ **ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.**

ಪ್ರತಿ:-

1. ಆಯುಕ್ತರು ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಡಳಿತಾಧಿಕಾರಿಗಳು, (ಪ್ರ) ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಛೇರಿ ಪ್ರತಿ.